ಮಾಡುತ್ತಾರೆ. ಅದು ಕೇಂದ್ರವಲ್ಲ ಸ್ವಾಮಿ. ಸಬ್ಸಿಡಿಯನ್ನು ಯಾರು ಫಿಕ್ಸ್ ಮಾಡುವುದು?

ಅಧ್ಯಕ್ಷರು: ಮಾನ್ಯ ಮಂತ್ರಿಗಳು ಉತ್ತರವನ್ನು ಹೇಳುತ್ತಾರೆ.

ಶ್ರೀ ಎಸ್.ಎ. ರವೀಂದ್ರನಾಥ್: ಪರಿಶೀಲನೆ ಮಾಡಿ ಅದನ್ನು ಸರಿ ಮಾಡುವಂತಹ ಕೆಲಸವನ್ನು ಮಾಡುತ್ತೇನೆ.

ಅಧ್ಯಕ್ಷರು: ಆಯಿತು. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

2 (ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಶ್ರೀ ಎಸ್. ಸುರೇಶ್‌ಕುಮಾರ್: ಮಾನ್ಯ ಸಭಾಧ್ಯಕ್ಷರೆ, ದಿನಾಂಕ: 4.3.2011ರ 5ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 63 ಪ್ರಶ್ನೆಗಳ ಪೈಕಿ 58 ಪ್ರಶ್ನೆಗಳ ಉತ್ತರಗಳನ್ನು ಹಾಗೂ ದಿನಾಂಕ: 25.2.2011ರ 1ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 31 ಪ್ರಶ್ನೆಗಳ ಪೈಕಿ 28 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು. ಈಗ ಶೂನ್ಯವೇಳೆ ಶ್ರೀಮತಿ ಮಲ್ಲಿಕಾ ಪ್ರಸಾದ್‌ರವರೆ, ತಾವು ಮಾತನಾಡಿ.

(ಅನುಬಂಧ – 1 ಹಾಗೂ ಅನುಬಂಧ – 2)

3. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಪ್ರಸ್ತಾವಿಸಲಾದ ವಿಷಯಗಳು:

(ಅ) ವಿಷಯ: ದಕ್ಷಿಣ ಕನ್ನಡ ಜಿಲ್ಲೆಯ ಖಾಸಗಿ ವೈದ್ಯರುಗಳಿಗೆ ಆಗಿರುವ ತೊಂದರೆಯ ಬಗ್ಗೆ.

ಶ್ರೀಮತಿ ಮಲ್ಲಿಕಾ ಪ್ರಸಾದ್ (ಪುತ್ತೂರು): ಮಾನ್ಯ ಅಧ್ಯಕ್ಷರೆ, ದಕ್ಷಿಣ ಕನ್ನಡ ಜಿಲ್ಲೆಯ ಖಾಸಗಿ ವೈದ್ಯರುಗಳಿಗೆ ಈಗಿನ ದಿನದಲ್ಲಿ ಆಗಿರುವಂತಹ ತೊಂದರೆಗಳನ್ನು ನಾನು ತಮ್ಮ ಮುಂದೆ ಹೇಳಲು ಬಯಸುತ್ತೇನೆ. ದಕ್ಷಿಣ ಕನ್ನಡ ಜಿಲ್ಲೆಯ ಖಾಸಗಿ ಕ್ಲಿನಿಕ್‌ಗಳಲ್ಲಿ ಪುರುಷ ಹಾಗೂ ಮಹಿಳೆಯರಿಗೆ